ಆ) 1. ನಾಗರಹೊಳೆಯಲ್ಲಿ ಟ್ರಕ್ಕಿಂಗ್ ಕ್ಯಾಂಪ್ ನಿರ್ಮಾಣಕ್ಕಾಗಿ ಕೇಂದ್ರ ಸರ್ಕಾರ 259.09 ಲಕ್ಷ ರೂಪಾಯಿಗಳು ಮಂಜೂರಾಗಿದ್ದು, 70.60ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ.

2) ಇರ್ಫು ಜಲಪಾತದ ಸಮೀಪದಲ್ಲಿ 10.00ಲಕ್ಷ ರೂಪಾಯಿಗಳ ವೆಚ್ಚದಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ನಿರ್ಮಿಸಲಾಗುತ್ತಿದ್ದು ಕಾಮಗಾರಿ ಪ್ರಗತಿಯಲ್ಲಿದೆ.

3) ಬಿಟ್ಟಂಗಾಲದ ಕೂರ್ಗ್ ಗಾಲ್ಫ್ ಲಿಂಕ್ಸ್ ಯೋಜನೆಗೆ ಕೇಂದ್ರಸರ್ಕಾರವು 277.00 ಲಕ್ಷ ರೂ.ಗಳಿಗೆ ಅನುಮೋದನೆ ನೀಡಿದೆ.

ಇ) ನಾಗರಹೊಳೆಯಲ್ಲಿ ಟ್ರಕ್ಕಿಂಗ್ ಕ್ಯಾಂಪ್ ನಿರ್ಮಾಣಕ್ಕಾಗಿ 259.09 ಲಕ್ಷ ರೂ. ಮಂಜೂರಾಗಿದ್ದು, 70.60 ಲಕ್ಷ ರೂ. ಬಿಡುಗಡೆ ಮಾಡಲಾಗಿದೆ. ಈ ಯೋಜನೆ ನಿರ್ಮಾಣ ಕಾರ್ಯವನ್ನು ಮೆ: ಅರಣ್ಯ ವಸತಿ ಮತ್ತು ವಿಹಾರಧಾಮ ಸಂಸ್ಥೆಗೆ ವಹಿಸಲಾಗಿದೆ. ಟ್ರಕ್ಕಿಂಗ್ ಕ್ಯಾಂಪ್ ಅಭಿವೃದ್ಧಿಗಾಗಿ ಮೆ: ತಾಜ್ ಸಂಸ್ಥೆಯವರು ಮುರ್ಕಲ್ ನಲ್ಲಿ ನಿರ್ಮಿಸಿರುವ ಅಪೂರ್ಣ ಕಟ್ಟಡಗಳನ್ನು ಅರಣ್ಯ ಇಲಾಖೆಯಿಂದ ಪಡೆದುಕೊಳ್ಳುವ ಬಗ್ಗೆ ಮೆ: ಅರಣ್ಯ ವಸತಿ ಮತ್ತು ವಿಹಾರಧಾಮ ಸಂಸ್ಥೆಯವರು ಅರಣ್ಯ ಇಲಾಖೆಯೊಂದಿಗೆ ಪತ್ರ ವ್ಯವಹಾರ ನಡೆಸುತ್ತಿದ್ದಾರೆ.

4783(5674) **ಶ್ರೀ ಜೋಪಯ್ಯ ಕೆ.ಜಿ. (ಮಡಿಕೇರಿ):** ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿ ಭೂ ದಾಖಲೆ (ಆರ್.ಟಿ.ಸಿ) ಯನ್ನು ಒದಗಿಸಲು ಹೋಬಳಿ ಮಟ್ಟದಲ್ಲಿ ಕಂಪ್ಯೂಟರೀಕರಣಗೊಳಿಸಿ ಆರ್.ಟಿ.ಸಿ. ಒದಗಿಸುವ ಯೋಜನೆ ಅನುಷ್ಠಾನಗೊಂಡಿದೆಯೇ; (ವಿವರಗಳನ್ನು ನೀಡುವುದು)

ಆ) ಈವರೆಗೆ ಅನುಷ್ಠಾನಗೊಳಿಸದಿದ್ದಲ್ಲಿ, ಕಾರಣಗಳೇನು ಹಾಗು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು):

ಅ) ಇಲ್ಲ.

ಆ) ಸಾರ್ವಜನಿಕ ಖಾಸಗಿ ಸಹಭಾಗಿತ್ವದೊಂದಿಗೆ ಗ್ರಾಮ ಮಟ್ಟದಲ್ಲಿ ಕಿಯಾಸ್ಕ್ ಗಳನ್ನು ಸ್ಥಾಪಿಸಲು ಸರ್ಕಾರವು ಉದ್ದೇಶಿಸಿದ್ದು, ಯೋಜನೆಯ ವಿವರಗಳನ್ನು ಅಂತಿಮಗೊಳಿಸಲಾಗುತ್ತಿದೆ.